ಇ) ಮೇಲ್ಕಂಡ 17 ಪ್ರಾಥಮಿಕ ಆರೋಗ್ಯ ಕೇಂದ್ರಗಳ ಪೈಕಿ, 10 ಪ್ರಾಥಮಿಕ ಆರೋಗ್ಯ ಕೇಂದ್ರಗಳು, 24x7 ಕಾರ್ಯನಿರ್ವಹಿಸುವ ಕೇಂದ್ರಗಳಾಗಿದ್ದು, ಅವುಗಳಲ್ಲಿ ದಿನದ 24 ಗಂಟೆ ಹೆರಿಗೆ ಸೌಲಭ್ಯ ಲಭ್ಯವಿದೆ. ಈ ಪೈಕಿ ಹೋಬಳಿ ಮಟ್ಟದಲ್ಲಿ 04 ಪ್ರಾಥಮಿಕ ಆರೋಗ್ಯ ಕೇಂದ್ರಗಳು (ಅಂದರೆ ತಾಯಿಲೂರು, ಬೈರಕೂರ್, ಅವನಿ ಮತ್ತು ನಂಗಳಿ) 24x7 ಕೇಂದ್ರಗಳಾಗಿ ಕಾರ್ಯನಿರ್ವಹಿಸುತ್ತಿವೆ. ಸದರಿ ಕೇಂದ್ರಗಳಲ್ಲಿ 03 ಶುಶ್ರೂಷಕರು ಪಾಳಿಯ ಮೇಲೆ ದಿನದ 24 ಗಂಟೆ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ವೈದ್ಯಾಧಿಕಾರಿಗಳು ರಾತ್ರಿಯ ವೇಳೆ ಕಾಲಡ್ಯೂಟಿ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದಾರೆ.

**ತಂಬಾಕು ಸೇವನೆಯಿಂದ ದುಷ್ಪರಿಣಾಮಗಳು**

**66 (241)**

**ಶ್ರೀ ರೋಷನ್ ಬೇಗ್. ಆರ್ (ಶಿವಾಜಿನಗರ)**

1) ರಾಜ್ಯದಲ್ಲಿ ಗುಟ್ಕಾ ಸೇವನೆ ನಿಷೇಧ ಮಾಡಲಾಗಿದೆಯೇ;

2) ದೇಶದ ಎಷ್ಟು ರಾಜ್ಯಗಳಲ್ಲಿ ಗುಟ್ಕಾ ನಿಷೇಧ ಮಾಡಲಾಗಿದೆ; ರಾಜ್ಯದಲ್ಲಿ ಗುಟ್ಕಾ ನಿಷೇಧ ಮಾಡದಿರಲು ಕಾರಣವೇನು;

3) ರಾಜ್ಯದಲ್ಲಿ ತಂಬಾಕು ಸೇವನೆಯಿಂದ ಆಗುವ ದುಷ್ಪರಿಣಾಮಗಳನ್ನು ತಡೆಯುವ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

**ಶ್ರೀ ಅರವಿಂದ ಲಿಂಬಾವಳಿ**

**(ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)**

1) ಇಲ್ಲ

2) 17 ರಾಜ್ಯಗಳಲ್ಲಿ ಗುಟ್ಕಾ ನಿಷೇಧ ಮಾಡಲಾಗಿದೆ.

ರಾಜ್ಯದಲ್ಲಿ ಗುಟ್ಕಾ ನಿಷೇಧಿಸುವ ಕುರಿತು ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ದಾಖಲಿಸಿದ್ದು, ಸದರಿ ಅರ್ಜಿಯ ವಿಚಾರಣೆ ನಡೆಯುತ್ತಿದೆ. ನ್ಯಾಯಾಲಯದ ಅಂತಿಮ ತೀರ್ಪಿಗೆ ಅನುಗುಣವಾಗಿ ಕ್ರಮ ತೆಗೆದುಕೊಳ್ಳಲಾಗುವುದು.

• 3) ರಾಜ್ಯದಲ್ಲಿ ಕೋಟ್ಪಾ 2003 (Cigarette and other Tobacco Products Act 2003) ಕಾಯ್ದೆಯನ್ನು ಕಟ್ಟುನಿಟ್ಟಾಗಿ ಆರೋಗ್ಯ, ಪೋಲೀಸ್ ಹಾಗೂ ಶಿಕ್ಷಣ ಇಲಾಖೆಗಳು ಅನುಷ್ಠಾನಗೊಳಿಸುತ್ತಿವೆ.

• ಆರೋಗ್ಯ ಇಲಾಖೆಯು ಹಲವಾರು ಜಾಗೃತಿ ಕಾರ್ಯಕ್ರಮಗಳನ್ನು ಪತ್ರಿಕೆ, ಟಿ.ವಿ. ಹಾಗೂ ರೇಡಿಯೋ ಮೂಲಕ ತಂಬಾಕು ಸೇವನೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ಜನರಿಗೆ ಅರಿವು ಮೂಡಿಸುವಲ್ಲಿ ಯಶಸ್ವಿಯಾಗಿದೆ.

• ಶಿಕ್ಷಣ ಇಲಾಖೆಯು ಶಾಲಾ ವಿದ್ಯಾರ್ಥಿಗಳ ಪಠ್ಯ ಪುಸ್ತಕಗಳಲ್ಲಿ ತಂಬಾಕು ಸೇವನೆಯಿಂದ ಆಗುವ ದುಷ್ಪರಿಣಾಮಗಳನ್ನು ಸಂದೇಶ ರೂಪದಲ್ಲಿ ಮುದ್ರಿಸಲಾಗಿದೆ. ಶಾಲಾ ಕಾಲೇಜುಗಳ ಆವರಣದಿಂದ 100 ಗಜಗಳ ಅಂತರದಲ್ಲಿ ತಂಬಾಕು ಮತ್ತು ಅದರ ಉತ್ಪನ್ನಗಳ ಮಾರಾಟವನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ.

• ಪೋಲೀಸ್ ಇಲಾಖೆಯು ಮಾಸಿಕ ಕ್ರೈಂ ವರದಿಯಲ್ಲಿ ಕೋಟ್ಪಾ ಕಾಯ್ದೆಯ ಅನುಷ್ಠಾನದ ಬಗ್ಗೆ ವರದಿ ನೀಡುತ್ತದೆ.

• ಮಹಾನಗರಪಾಲಿಕೆಯು ನಗರ ಪ್ರದೇಶಗಳಲ್ಲಿ ಕೋಟ್ಪಾ 2003 ಕಾಯ್ದೆಯನ್ನು ಕಟ್ಟುನಿಟ್ಟಾಗಿ ಪಾಲಿಸುತ್ತಿದ್ದು, ತಪ್ಪಿತಸ್ಥರಿಗೆ ದಂಡ ವಿಧಿಸುವ ಮೂಲಕ ತಂಬಾಕು ನಿಯಂತ್ರಣ ಮಾಡುತ್ತಿದೆ.

• ರಾಜ್ಯ ಸರ್ಕಾರವು ಸರ್ಕಾರೇತರ ಸಂಸ್ಥೆಗಳೊಡನೆ consortium ರೂಪಿಸಿದ್ದು, ಈ ಮೂಲಕವೂ ಹಲವು ಜಾಗೃತಿ ಕಾರ್ಯಕ್ರಮಗಳನ್ನು ನಡೆಸುತ್ತಿದೆ.

**ಬೇಸಿಗೆಯಲ್ಲಿ ಗೋಶಾಲೆ ಮೇವು ಹಾಗೂ ನೀರಿನ ಲಭ್ಯತೆ**

62 : (239)

**ಶ್ರೀ ನರೇಂದ್ರ ಸ್ವಾಮಿ ಪಿ.ಎಂ (ಮಳವಳ್ಳಿ)**

ಅ) ಬರ ಪೀಡಿತ ಪ್ರದೇಶವಾದ ಮಳವಳ್ಳಿ ತಾಲ್ಲೂಕಿಗೆ ಬೇಸಿಗೆಯಲ್ಲಿ ಮೇವು ಮತ್ತು ನೀರಿನ ಲಭ್ಯತೆಯೊಂದಿಗೆ ಗೋ ಶಾಲೆಗಳನ್ನು ತೆರೆಯಲು ಸರ್ಕಾರವು ಬಿಡುಗಡೆ ಮಾಡಿರುವ ಹಣದ ಮೊತ್ತವೆಷ್ಟು ? (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಪೂರ್ಣ ವಿವರ ನೀಡುವುದು)